## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಕಳಸಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎ.ಹೆಚ್.ಮಣಿಯಾರ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/5960/2016/ARLO-1, ದಿನಾಂಕ:03.10.2016
2) ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ 09.11.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 23.09.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಶೇಖಪ್ಪ ರಾಮಪ್ಪ ಮರೆಪ್ಪನವರ, ಕಮಡೊಳ್ಳಿ ಗ್ರಾಮ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಕಳಸಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎ.ಹೆಚ್.ಮಣಿಯಾರ ಇವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕೆಳಕಂಡ ಅಂಶಗಳು ಕಂಡುಬಂದಿರುವುದಾಗಿ ಕೆಳಗಿನಂತೆ ವರದಿ ಮಾಡಲಾಗಿದೆ.

"ಶೌಚಾಲಯ ನಿರ್ಮಾಣ ಕಾಮಗಾರಿಗೆ ಒಟ್ಟು 29 ಶೌಚಾಲಯಗಳು ಮಂಜೂರಾಗಿದ್ದು, ಅವುಗಳ ಪೈಕಿ 14 ಶೌಚಾಲಯಗಳ ನಿರ್ಮಾಣದಲ್ಲಿ ಕಾಮಗಾರಿ ಮಾಡದೇ ತಲಾ ರೂ.4,495/- ಗಳಂತೆ ಒಟ್ಟು ರೂ.62,903/- ಗಳ ಮೊತ್ತದ ಹಣ ದುರ್ಬಳಕೆಯಾಗಿದೆ. ಎಸ್.ಡಿ.ಎಸ್. ತಡೆಗೋಡೆ ಯೋಜನೆ ಕೆಲಸ ನಿರ್ವಹಣೆಗೆ ರೂ.2,40,436/- ಗಳು ದುರುಪಯೋಗಿದೆ. ಲಭ್ಯವಿರುವ ದಾಖಲೆಗಳ ಪ್ರಕಾರ ಎದುರುದಾರರು ಈ ಕಾಮಗಾರಿಗಳಲ್ಲಿ ಒಟ್ಟು ರೂ.3,03,339/- ಗಳ ಹಣದ ದುರುಪಯೋಗಪಡಿಸಿಕೊಂಡಿರುವುದು ಕಂಡು ಬಂದಿದೆ."

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಎದುರುದಾರರಾದ ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಕಳಸಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎ.ಹೆಚ್.ಮಣಿಯಾರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಎದುರುದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ದುರುಪಯೋಗದ ಮೊತ್ತವನ್ನು ವಸೂಲಿ ಮಾಡಲು ಕ್ರಮವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ದುರುಪಯೋಗದ ಮೊತ್ತವನ್ನು ವಸೂಲಿ ಮಾಡಲು ಕ್ರಮವಹಿಸುವಂತೆ ಮೇಲೆ ಓದಲಾದ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಧಾರವಾಡ ಜಿಲ್ಲಾ ಪಂಚಾಯತಿ ಇವರಿಗೆ ನಿರ್ದೇಶನ ನೀಡಲಾಗಿದೆ ಹಾಗೂ ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀ ಎ.ಹೆಚ್.ಮಣಿಯಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಳಸಾ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 701 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 09.11.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎ.ಹೆಚ್.ಮಣಿಯಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಳಸಾ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ, ಕುಂದಗೋಳ, ಧಾರವಾಡ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಎ.ಹೆಚ್.ಮಣಿಯಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಳಸಾ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.